ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 200 ಅಪಸೇ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 05-01-2016

ಅ ಧಿ ಸೂ ಚ ನೆ

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಕಂಡಿಕೆ 3 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ದಿನಾಂಕ: 07-06-2014 ರ ಅಧಿಸೂಚನೆ ಸಂಖ್ಯೆ: ಅಪಜೀ 232 ಅಪಸೇ 2013 ರಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವೃಂದದಲ್ಲಿ ರಾಜ್ಯವ್ಯಾಪಿ ಸ್ಥಳೀಯ ವೃಂದವನ್ನು ರಚಿಸಲಾಗಿದೆ.

2. ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013 ರ ನಿಯಮ 6 ರ ಉಪ ನಿಯಮ 2 ರಂತೆ ದಿನಾಂಕ: 11-08-2014 ರ ಅಧಿಸೂಚನೆ ಸಂಖ್ಯೆ: ಅಪಜೀ 232 ಅಪಸೇ 2013 ರಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವೃಂದದಲ್ಲಿ ಶೂನ್ಯ ಹಂಚಿಕೆಯೊಂದಿಗೆ ನೇರ ನೇಮಕಾತಿ ಮತ್ತು ಬಡ್ತಿಯ ಮೂಲಕ ತುಂಬುವ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸಿ ಅಧಿಸೂಚಿಸಲಾಗಿದೆ. ಇದರ ಪ್ರಕಾರ, ಮುಂಬಡ್ತಿಯಲ್ಲಿ 16+1=17 ಹುದ್ದೆಗಳು ಮತ್ತು ನೇರ ನೇಮಕಾತಿಯಲ್ಲಿ 5 ಹುದ್ದೆಗಳನ್ನು ಮೀಸಲಿರಿಸಿದೆ.

3. ದಿನಾಂಕ: 06-09-2014 ರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಇವರ ಅಧಿಕೃತ ಜ್ಞಾಪನ ಸಂಖ್ಯೆ: ಬಿ3.ಸಿಬ್ಬಂದಿ.ಏವ 103/2013-14 ರಲ್ಲಿ ವಲಯ ಅರಣ್ಯಾಧಿಕಾರಿ ವೃಂದದಲ್ಲಿ ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ರಾಜ್ಯವ್ಯಾಪಿ ಸ್ಥಳೀಯ ವೃಂದವನ್ನು ರಚಿಸಲಾಗಿದೆ.

4. ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013 ರ ನಿಯಮ 8 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸ್ಥಳೀಯ ವೃಂದದಲ್ಲಿ ಅಧಿಸೂಚಿಸಿರುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನೇರ ನೇಮಕಾತಿಯಲ್ಲಿ ಮೀಸಲಿರಿಸಿದ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳೀಯ ವ್ಯಕ್ತಿಗಳಲ್ಲದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳನ್ನು ವೃಂದ ನಿಯಂತ್ರಣದ ಉದ್ದೇಶಗಳಿಗಾಗಿ ಉಳಿದ ಮೂಲ ವೃಂದಕ್ಕೆ ಅಂದರೆ ಹೈದ್ರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿದ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಬದಲಾಯಿಸಿದ / ವರ್ಗಾಯಿಸಿದ ನಂತರ, ನೇರ ನೇಮಕಾತಿಯ ಸ್ಥಳೀಯ ವೃಂದದಲ್ಲಿ ಖಾಲಿ ಬೀಳುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗಳಿಗೆ ರಾಜ್ಯವ್ಯಾಪಿಯ ಸ್ಥಳೀಯ ವೃಂದವನ್ನು ಆಯ್ಕೆ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ವಲಯ ಅರಣ್ಯಾಧಿಕಾರಿಗಳಿಗೆ ರೂ. 28100-50100 ಗಳ ವೇತನ ಶ್ರೇಣಿಯ ನೇರ ನೇಮಕಾತಿಯಲ್ಲಿ

ಪುಟ 2 ಕ್ಕೆ

ಮೀಸಲಿರಿಸಿದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 32 ರಡಿ ಸಾರ್ವಜನಿಕ ಹಿತದೃಷ್ಠಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ತಾತ್ಕಾಲಿಕ ಬಡ್ತಿ ನೀಡಿ, ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಹುದ್ದೆಗಳಿಗೆ ನೇಮಿಸಲಾಗಿದೆ.

| ಕ್ರಮ ಸಂಖ್ಯೆ | ವಲಯ ಅರಣ್ಯಾಧಿಕಾರಿಯ ಹೆಸರು | ವಲಅ ಜ್ಯೇಷ್ಠತಾ ಕ್ರಮಾಂಕ / ಸ್ಥಳೀಯ ವೃಂದ | ಮೀಸಲಾತಿ ಬಿಂದು | ತಾತ್ಕಾಲಿಕ ಬಡ್ತಿ ನೀಡಿ ನೇಮಿಸಲಾದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆ |
|---|---|---|---|---|
| | ಶ್ರೀಯುತರಾದ | | | |
| 1 | ಸಗಾವೆ ಟಿ ಎಂ | 24 | 02/02 | ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಉಪ ವಿಭಾಗ, ಬೀದರ್-ಶ್ರೀಮತಿ ಸರೀನಾ ಸಿಕ್ಕಲಿಗಾರ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ |
| 2 | ಶಿವಶರಣಪ್ಪ ದೊಡ್ಡಪ್ಪ | 26 | 01/16 | ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಜಿಲ್ಲಾ ಜಲಾನಯನ, ಯಾದಗೀರ್-ಶ್ರೀ ಉದಯಕುಮಾರ್ ಜೋಗಿ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಕೃಷಿ ಇಲಾಖೆಯ ವಶಕ್ಕೆ ನೀಡಿದೆ. |
| 3 | ಪೋತಪ್ಪ ಕ ಯು | 28 | 01/17 | ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಜಿಲ್ಲಾ ಜಲಾನಯನ, ಬಳ್ಳಾರಿ-ಶ್ರೀ ತಸಗಾಂವಕರ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಕೃಷಿ ಇಲಾಖೆಯ ವಶಕ್ಕೆ ನೀಡಿದೆ. |
| 4 | ರಾಜೇಂದ್ರ ವಿ ಡಿ | 29 | 01/18 | ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ಉಪ ವಿಭಾಗ, ಯಾದಗೀರ್-ಶ್ರೀ ನರಸಿಂಗ ರಾವ್ ಮುತಾಲಿಕ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ |
| 5 | ಮೋಹನ್ ಎಂ ಡಿ | 32 | 02/01 | ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಸಂಶೋಧನೆ, ಬಳ್ಳಾರಿ-ಶ್ರೀ ಬಿ ಕೆ ರೆಡ್ಡರ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ |

ಪುಟ 3 ಕ್ಕೆ

5. ಈ ತಾತ್ಕಾಲಿಕ ಬಡ್ತಿ ಆದೇಶವು ದಿನಾಂಕಃ 17-08-2015 ರಂದು ನಡೆದ ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ಅರಣ್ಯ ಇಲಾಖೆಯಲ್ಲಿ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ ನೀಡಿದ ಸೂಚನೆ / ನಿರ್ದೇಶನಕ್ಕೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್ ಸಿ ರಾಜೇಂದ್ರಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

ಇವರಿಗೆಃ

1. ಪ್ರಧಾನ ಮಹಾಲೇಖಾಪಾಲರು (ಎ ಮತ್ತು ಇ) ರವರ ಕಾರ್ಯದರ್ಶಿ, ಕರ್ನಾಟಕ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆಃ 5398, ಬೆಂಗಳೂರು
2. ಪ್ರಧಾನ ಮಹಾಲೇಖಾಪಾಲರು (ಇ ಮತ್ತು ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆಃ 5398, ಬೆಂಗಳೂರು
3. ಪ್ರಧಾನ ಮಹಾಲೇಖಾಪಾಲರು (ಜಿ ಮತ್ತು ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆಃ 5398, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಅರಣ್ಯ) / ಕಾರ್ಯದರ್ಶಿಗಳು (ಪರಿಸರ), ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
5. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು)/(ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
7. ಆಯುಕ್ತರು, ಜಲಾನಯನ ಅಭಿವೃದ್ದಿ ಇಲಾಖೆ, ಕಾವೇರಿ ಭವನ, ಬೆಂಗಳೂರು
8. ಎಲ್ಲ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು- ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಇವರ ಮೂಲಕ
9. ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿಗಳು
10. ಸಂಬಂಧಿಸಿದ ಅಧಿಕಾರಿಗಳಿಗೆ(ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಇವರ ಮೂಲಕ
11. ಶಾಖಾ ರಕ್ಷಕ ಕಡತ / ಬಿಡಿ ಪ್ರತಿಗಳು / ODGS